# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 234(218) |
| ಸದಸ್ಯರ ಹೆಸರು | : | ಶ್ರೀ ಎನ್. ರವಿಕುಮಾರ್<br>(ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 17.02.2022 |
| ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಸಿಲ್ಕ್‌ಬೋರ್ಡ್‌ನಿಂದ ಎಲೆಕ್ಟ್ರಾನಿಕ್ ಸಿಟಿಯನ್ನು ಸಂಪರ್ಕಿಸುವ ಮೇಲು ರಸ್ತೆಯ ಪಿಲ್ಲರ್ ಸಂಖ್ಯೆ: 20 ಮತ್ತು 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಾಜಕಗಳನ್ನು ತೆರವುಗೊಳಿಸುವ ಪೊಲೀಸರಿಗೆ ಯಾವ ನಿಯಮದನ್ವಯ ಅಧಿಕಾರವನ್ನು ನೀಡಲಾಗಿದೆ ; | ಸಿಲ್ಕ್‌ಬೋರ್ಡ್‌ನಿಂದ ಎಲೆಕ್ಟ್ರಾನಿಕ್ ಸಿಟಿ ಸಂಪರ್ಕಿಸುವ ಮೇಲು ರಸ್ತೆಯ ಪಿಲ್ಲರ್ ಸಂಖ್ಯೆ: 20 & 21ರ ನಡುವಿನ ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಜಕಗಳನ್ನು ತೆರವುಗೊಳಿಸುವ ಅಧಿಕಾರ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವ್ಯಾಪ್ತಿಗೆ ಒಳಪಟ್ಟಿದ್ದು, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರೇ ರಸ್ತೆ ವಿಭಜಕಗಳನ್ನು ತೆರವುಗೊಳಿಸಿರುತ್ತಾರೆ. |
| (ಆ) | ರಾಜ್ಯ ಸರ್ಕಾರದ ಯಾವುದೇ ರಸ್ತೆ ಅಥವಾ ರಾಷ್ಟ್ರೀಯ ಹೆದ್ದಾರಿಯ ಯಾವುದೇ ರಸ್ತೆಯ ರಸ್ತೆ ವಿಭಾಜಕಗಳನ್ನು ಪೊಲೀಸ್ ಯಾವ ನಿಯಮದನ್ವಯ ತೆರವುಗೊಳಿಸಬಹುದು (ಮಾಹಿತಿ ನೀಡುವುದು) ; | ರಾಷ್ಟ್ರೀಯ ಹೆದ್ದಾರಿಯ ರಸ್ತೆ ವಿಭಜಕಗಳನ್ನು ತೆರವುಗೊಳಿಸುವ ಅಧಿಕಾರ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವ್ಯಾಪ್ತಿಗೆ ಒಳಪಟ್ಟಿರುತ್ತದೆ.<br>ಕಮೀಷನರೇಟ್ ವ್ಯಾಪ್ತಿಯ ರಸ್ತೆಗಳಲ್ಲಿ ಸಾರ್ವಜನಿಕ ಸುಗಮ ಸಂಚಾರದ ಹಿತದೃಷ್ಟಿಯಿಂದ ವಿಭಜಕಗಳನ್ನು ತೆರವುಗೊಳಿಸುವುದು ಅನಿವಾರ್ಯವೆಂದು ಕಂಡು ಬಂದಲ್ಲಿ ಅಧಿಸೂಚನೆ ಹೊರಡಿಸುವ ಮೂಲಕ ಅನುವು ಮಾಡಿಕೊಡುವುದು ಪೊಲೀಸ್ ಆಯುಕ್ತರವರಿಗೆ ಅಧಿಕಾರ ಪ್ರದತ್ತವಾಗಿರುತ್ತದೆ. |
| (ಇ) | ಪೊಲೀಸ್ ಇಲಾಖೆಗೆ ನಿರ್ದೇಶಕರು, ಬಿ.ಈ.ಟಿ.ಪಿ.ಎಲ್ ಎಲೆಕ್ಟ್ರಾನಿಕ್ ಸಿಟಿ ಇವರು ಅನುಮತಿ ನೀಡಿಲ್ಲವೆಂದಾದಲ್ಲಿ ಅಕ್ರಮವಾಗಿ ರಸ್ತೆ ವಿಭಾಜಕಗಳನ್ನು ತೆರವುಗೊಳಿಸಿ ಪೊಲೀಸ್ ಅಧಿಕಾರಿಗಳ ಮೇಲೆ ರಾಷ್ಟ್ರೀಯ ಸಂಪತ್ತಿಗೆ ಹಾನಿಗೊಳಿಸಿದ ಕುರಿತು ತೆಗೆದುಕೊಂಡ ಕ್ರಮಗಳೇನು ? | ರಾಷ್ಟ್ರೀಯ ಹೆದ್ದಾರಿಯ 7ರ ನಡುವಿನ ರಸ್ತೆ ವಿಭಜಕಗಳನ್ನು ಪೊಲೀಸ್ ಇಲಾಖೆಯಿಂದ ತೆರವುಗೊಳಿಸಿರುವುದಿಲ್ಲ.<br>ದಿನಾಂಕ:03.04.2019 ರಂದು ರಸ್ತೆ ಸುರಕ್ಷತಾ ಸಮಿತಿಯ ಸಭೆಯಲ್ಲಿ ಕೈಗೊಂಡ ನಿರ್ಣಯದಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ತೆರವುಗೊಳಿಸಲಾಗಿರುತ್ತದೆ.<br>ರಸ್ತೆ ವಿಭಜಕಗಳನ್ನು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದವರು ತೆರವುಗೊಳಿಸಿರುವುದರಿಂದ ಪೊಲೀಸ್ ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಳ್ಳುವ ಪ್ರಶ್ನೆ ಉದ್ಭವವಾಗುವುದಿಲ್ಲ. |

**ಹೆಚ್‌ಡಿ 42 ಎಸ್‌ಎಸ್‌ಟಿ 2022**

(ಆರಗ ಜ್ಞಾನೇಂದ್ರ)
ಗೃಹ ಸಚಿವರು